## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ. ನಾಗೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಡಂತ್ಯಾರ ಗ್ರಾಮ ಪಂಚಾಯತ್, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ D.O.No. Compt/UPLOK/MYS/4286/2014/ARLO-1, ದಿನಾಂಕ: 06.02.2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 10.01.2017 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಪಿ.ಹರೀಶ್ ಕುಮಾರ್, ಬಿನ್ ಪಿ.ಬಾಬುರಾವ್ ಮಡಂತ್ಯಾರ ಗ್ರಾಮ, ಪಾರೆಂಕಿ ನಿವಾಸಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ರವರು ಸರ್ಕಾರಿ/ಸಾರ್ವಜನಿಕ ನೌಕರರಾದ 1) ಶ್ರೀ. ನಾಗೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಡಂತ್ಯಾರ ಗ್ರಾಮ ಪಂಚಾಯತ್, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, 2) ಅಧ್ಯಕ್ಷರಾದ ಶ್ರೀಮತಿ ಸುಶೀಲ ಮತ್ತು 3) ಉಪಾಧ್ಯಕ್ಷರಾದ ಶ್ರೀ ಅಬ್ದುಲ್ ರೆಹಮಾನ್ ಪಡಪು ಇವರ ವಿರುದ್ಧ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 9 ರಡಿ ತನಿಖೆ ತೆಗೆದುಕೊಂಡಿದ್ದಿದೆ.

ದೂರಿನ ಸಂಕ್ಷಿಪ್ತ ವಿವರಣೆ:– ಬೆಳ್ತಂಗಡಿ ತಾಲ್ಲೂಕ್ ಮಡಂತ್ಯಾರು ಗ್ರಾ.ಪಂ. ವ್ಯಾಪ್ತಿಯ ಪಾರಕ್ಕಿ ಗ್ರಾಮದ ಶ್ರೀ ಟಿ.ವಿ.ಶ್ರೀಧರ್‌ರಾವ್ ಎಂಬುವವರು ಸದರಿ ಗ್ರಾಮದ ಸರ್ವೆ ನಂ. 177/1ಪಿ ರಲ್ಲಿ ವಾಸ್ತವ್ಯ ಉದ್ದೇಶಕ್ಕಾಗಿ ಕಟ್ಟಡ ಕಟ್ಟಲು ಎದುರುದಾರರಿಂದ ಪರವಾನಗಿ ಪಡೆದು ವಾಣಿಜ್ಯ ಕಟ್ಟಡ ಕಟ್ಟಲು ಪ್ರಾರಂಭಿಸಿದ್ದಾರೆ. ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಎದುರುದಾರರಿಗೆ ಹಲವಾರು ಬಾರಿ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲವೆಂದು ಹೇಳಿದ್ದಾರೆ.

ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, 1 ರಿಂದ 3ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ–

> ಸದರಿ ಜಮೀನಿನಲ್ಲಿ ಕಟ್ಟಡ ನಿರ್ಮಿಸಲು ಪರಿವರ್ತನಾದೇಶ, ನಕ್ಷೆ, ಕಟ್ಟಡ ಪ್ಲಾನ್, ಅಂದಾಜು ಪಟ್ಟಿ, ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ಪರಿಶೀಲಿಸಿ, ದಿ: 10–09–2014 ರಂದು ಪಂಚಾಯತಿ ಸಾಮಾನ್ಯ ಸಭೆಯ ಮುಂದೆ ನಿರ್ಣಯ ಸಂಖ್ಯೆ: 112/2014–15ರಂತೆ ಪಂಚಾಯಿತಿಯ ಅನುಮತಿ ಪಡೆದು ಕಟ್ಟಡ ಪರವಾನಗಿ ನೀಡಲಾಗಿದೆ. ಈ ಸಂಬಂಧವಾಗಿ ಪಂ.ರಾಜ್ ಇಂಜಿನಿಯರಿಂಗ್ ವಿಭಾಗದ ಅಭಿಯಂತರರು ಸಹ ಸ್ಥಳ ಪರಿಶೀಲನೆ ಮಾಡಿ ವರದಿ ನೀಡಿದ್ದಾರೆ. ಆ ನಂತರ, ದೂರುದಾರರು ಕಟ್ಟಡದ ಮಾಲೀಕರು ನಕ್ಷೆ ಮತ್ತು ಪರವಾನಗಿಯಲ್ಲಿ ಹೇಳಲಾದ ಷರತ್ತುಗಳಿಗೆ ವಿರುದ್ಧವಾಗಿ ಕಟ್ಟಡ ನಿರ್ಮಿಸುತ್ತಿರುವ ಬಗ್ಗೆ ದೂರು ನೀಡಿದ್ದು, ಈ ಬಗ್ಗೆ ಕಟ್ಟಡದ ಮಾಲೀಕರಿಗೆ ನೋಟೀಸ್ ನೀಡಿ, ಕಟ್ಟಡ ಸ್ಥಗಿತಗೊಳಿಸುವಂತೆ ಎಚ್ಚರಿಕೆ ನೀಡಲಾಗಿದೆ. ಆ ನಂತರವು, ಸಹ ದೂರುದಾರರು ದೂರು ನೀಡಿದ್ದು, ಸದರಿ ದೂರಿಗೆ ಸಂಬಂಧಿಸಿದಂತೆ ಇಲಾಖಾ ಘರ್ಯಾವೇಕ್ಷಕರ ಮೂಲಕ ಸ್ಥಳ ಅಳತೆ ಮಾಡಿದ ನಂತರ ಅನಧಿಕೃತ ಕಟ್ಟಡಕ್ಕೆ ಸಂಬಂಧಪಟ್ಟಂತೆ ಕ್ರಮ ಕೈಗೊಳ್ಳಬೇಕಾಗಿದೆ. ಕಟ್ಟಡದ ರಚನೆಯು ತೋರಿಕೆಯ ಆಧಾರದಲ್ಲಿ ವಾಣಿಜ್ಯ ಕಟ್ಟಡವೋ ಅಥವಾ ವಾಸ್ತವ್ಯದ

ಕಟ್ಟಡವೋ ಎಂದು ನಿರ್ಣಯಿಸಲು ಬರುವುದಿಲ್ಲ. ಸದರಿ ಕಟ್ಟಡ ಪೂರ್ಣಗೊಂಡ ನಂತರ, ವರದಿ ಸಲ್ಲಿಸಿದ ನಂತರ ಗ್ರಾ.ಪಂ. ಸ್ಥಳ ಪರಿಶೀಲನೆ ಮಾಡಿ, ಪರವಾನಗಿ ಷರತ್ತುಗಳಿಗನುಗುಣವಾಗಿ ಕಟ್ಟಡ ನಿರ್ಮಿಸಿದಲ್ಲಿ ಮಾತ್ರ ಅನುಮತಿ ನೀಡಲಾಗಿದೆ. ಒಂದು ವೇಳೆ ಷರತ್ತನ್ನು ಉಲ್ಲಂಘಿಸಿದ್ದಲ್ಲಿ, ಸದರಿ ಕಟ್ಟಡಕ್ಕೆ ಮನೆ ನಂಬರ್ ನೀಡಿಲ್ಲ. ಪರವಾನಗಿಯನ್ನು ರದ್ದುಪಡಿಸಲಾಗಿದೆ. ಸದರಿ ಕಟ್ಟಡ ಇನ್ನು ಸಹ ಪೂರ್ಣಗೊಂಡಿಲ್ಲದ ಕಾರಣ ಸ್ಥಳ ಪರಿಶೀಲನೆ ಮಾಡುವ ಅವಶ್ಯಕತೆ ಇರುವುದಿಲ್ಲವೆಂದು ಹೇಳಿದ್ದಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ಎದುರುದಾರರ ಆಕ್ಷೇಪಣೆಯನ್ನು ಅಲ್ಲಗಳೆದು, ದೂರಿನ ಅಂಶಗಳೆದು, ದೂರಿನ ಅಂಶಗಳನ್ನೇ ಪುನರುಚ್ಚರಿಸಿದ್ದಾರೆ.

ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ;

ಬೆಳ್ತಂಗಡಿ ತಾಲ್ಲೂಕ್ ಮಡಂತ್ಯಾರು ಗ್ರಾ.ಪಂ. ವ್ಯಾಪ್ತಿಯ ಪಾರಕ್ಕಿ ಗ್ರಾಮ ಶ್ರೀ ಟಿ.ವಿ.ಶ್ರೀಧರ್‌ರಾವ್ ಎಂಬುವವರು ಸದರಿ ಗ್ರಾಮದ ಸರ್ವೆ ನಂ.177/1ಪಿ ರಲ್ಲಿ ವ್ಯಾಸ್ತವ್ಯ ಉದ್ದೇಶಕ್ಕಾಗಿ ಕಟ್ಟಡ ಕಟ್ಟಲು ಎದುರುದಾರರಿಂದ ಪರವಾನಗಿ ಪಡೆದಿರುವುದು ಕಂಡು ಬಂದಿದೆ. ದೂರುದಾರರು ಸದರಿ ಕಟ್ಟಡವನ್ನು ಪರವಾನಗಿ ಮತ್ತು ನಕ್ಷೆಗೆ ವಿರುದ್ಧವಾಗಿ ನಿರ್ಮಿಸಿರುವ ಬಗ್ಗೆ ದಿ: 30/09/2014 ಮತ್ತು 17/11/2014 ರಂದು ಎದುರುದಾರರಿಗೆ ದೂರು ನೀಡಿದ್ದು, ಎದುರುದಾರರು ಈ ಬಗ್ಗೆ ಕಟ್ಟಡದ ಮಾಲೀಕರಿಂದ ಮಾಹಿತಿ ಕೋರಿ, ಕಟ್ಟಡ ಕಾಮಗಾರಿಯನನು ಸ್ಥಗಿತಗೊಳಿಸುವ ಬಗ್ಗೆ ತಿಳಿಸಿದ್ದಾರೆ. ಆದರೆ, ಆ ಸಂದರ್ಭದಲ್ಲಿ 1ನೇ ಎದುರುದಾರರು ಸ್ಥಳ ಪರಿಶೀಲನೆ ಮಾಡಿಲ್ಲ. ಸದರಿ ಕಟ್ಟಡ ಕಾಮಗಾರಿಯನ್ನು ಸ್ಥಗಿತಗೊಳಿಸುವ ಬಗ್ಗೆ ಯಾವುದೇ ಕ್ರಮ ಕೈಗೊಂಡಿಲ್ಲ. ಆದರೆ, ಕರ್ನಾಟಕ ಪಂ.ರಾಜ್ ಅಧಿನಿಯಮ, ಕಲಂ 64 ಮತ್ತು 65ರಂತೆ ಯಾವುದೇ ಕಟ್ಟಡಕ್ಕೆ ಸಂಬಂಧಪಟ್ಟಂತೆ ದೂರು ಬಂದಲ್ಲಿ ತಕ್ಷಣ ಸ್ಥಳ ಪರಿಶೀಲನೆ ಮಾಡಿ, ಸದರಿ ಅನಧಿಕೃತ ಕಟ್ಟಡದ ಭಾಗಗಳನ್ನು ತೆರವುಗೊಳಿಸುವ ಬಗ್ಗೆ ಕ್ರಮ ಕೈಗೊಳ್ಳುವುದು ಸಕ್ಷಮ ಪ್ರಾಧಿಕಾರದ ಅಧಿಕಾರಿಯ ಜವಾಬ್ದಾರಿಯಾಗಿದೆ. ಸದರಿ ಕಟ್ಟಡದಲ್ಲಿ ಈಗಾಗಲೇ ಆದಾಯ ತೆರಿಗೆಯ ಪಾನ್ ಸರ್ವಿಸ್ ಸೆಂಟರ್, ಯುಟಿಐ ಟೆಕ್ನಾಲಜಿ ಸರ್ವಿಸ್ ಸೆಂಟರ್ ಮತ್ತು ಭಾರತೀಯ ಜೀವ ವಿಮಾ ನಿಗಮದ ಕಛೇರಿಗಳು ಅಸ್ತಿತ್ವದಲ್ಲಿರುವ ಬಗ್ಗೆ ಕಂಡು ಬಂದಿದೆ. ಸದರಿ ಕಟ್ಟಡದ ಮಾಲೀಕರು ಎದುರುದಾರರಿಂದ ವಾಸದ ಮನೆ ನಿರ್ಮಾಣ ಮಾಡುವ ಉದೇಶಕ್ಕೆ ಉಪವಾನಗಿ ಪಡೆದು ವಾಣಿಜ್ಯ ವ್ಯವಹಾರಕ್ಕಾಗಿ ಕಟ್ಟಡ ನಿರ್ಮಿಸಿ, ಷರತ್ತನ್ನು ಉಲ್ಲಂಸಿರುವ ವಿಚಾರ 1ನೇ ಎದುರುದಾರರಿಗೆ ಗೊತ್ತಿದ್ದರೂ ಸಹ ಯಾವುದೇ ಕ್ರಮ ಕೈಗೊಳ್ಳದೇ ಕರ್ತವ್ಯ ಲೋಪ ಎಸಗಿದ್ದಾರೆ.

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು, ಕಡತದ ಸಂಗತಿಗಳು, ದಾಖಲಾತಿಗಳು ಹಾಗೂ ಎದುರುದಾರರ ಆಕ್ಷೇಪಣೆಯನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ ಒಂದನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆ ಇಲ್ಲದೆ, ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತದೆ. ಎರಡು ಮತ್ತು ಮೂರನೇ ಎದುರುದಾರರು ಮಾಜಿ ಗ್ರಾ.ಪಂ. ಅಧ್ಯಕ್ಷ ಮತ್ತು ಉಪಾಧ್ಯಕ್ಷರಾಗಿದ್ದು, ಸದರಿಯವರ ಕಾರ್ಯಾವಧಿಯು ಮುಗಿಯುವುದರಿಂದ ಎರಡು ಮತ್ತು ಮೂರನೇ ಎದುರುದಾರರ ವಿರುದ್ಧದ ನಡವಳಿಗಳನ್ನು ಕೈಬಿಡಲಾಗಿದೆ.

ಹಿನ್ನೆಲೆಯಲ್ಲಿ ಶ್ರೀ. ನಾಗೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಡಂತ್ಯಾರ ಗ್ರಾಮ ಪಂಚಾಯತ್, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ ಇವರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966 ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ದುರ್ವರ್ತನೆ ಕಂಡು ಬಂದಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ಮಾಡಲು, ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿ 1957 ನಿಯಮ 14 (ಎ) ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/121/ಗ್ರಾಪಂಕಾ/2017 ಬೆಂಗಳೂರು, ದಿನಾಂಕ–18–03–2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ ಶ್ರೀ. ನಾಗೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಡಂತ್ಯಾರ ಗ್ರಾಮ ಪಂಚಾಯತ್, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ, ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ನಿಯಮಾನುಸಾರ ಸೂಕ್ತ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಪುಟ ಸಂಖ್ಯೆ 01 ರಿಂದ 103 ಇದರೊಂದಿಗೆ ಲಗತ್ತಿಸಿ ಹಿಂದಿರುಗಿಸಿದೆ).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ.
6. ಶ್ರೀ. ನಾಗೇಶ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಮಡಂತ್ಯಾರ ಗ್ರಾಮ ಪಂಚಾಯತ್, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ,
7. ಗಣಕ ಕೋಶ
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.